ಕರ್ನಾಟಕ ಸರ್ಕಾರ

ಕಾಲೇಜು ಶಿಕ್ಷಣ ಇಲಾಖೆ

ಸಂಖ್ಯೆ: ಕಾಶಿಇ 102 ಪ್ರಭಾರ 2017-18 ವ&ನಿ

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ.
ಬೆಂಗಳೂರು. ದಿನಾಂಕ:04-10-2017

## ಸುತ್ತೋಲೆ

ವಿಷಯ: ಅನ್ಯ ಕಾರ್ಯ ನಿಮಿತ್ತ ಪ್ರಾಂಶುಪಾಲರುಗಳ ಕೌನ್ಸಲಿಂಗ್ ಪ್ರಕ್ರಿಯೆ ಬಗ್ಗೆ.

ಉಲ್ಲೇಖ:
1. ಈ ಕಛೇರಿಯ ಟಿಪ್ಪಣಿ ಸಂಖ್ಯೆ:ಕಾಶಿಇ/01/ಆಆಶಾ/2017-18 ದಿನಾಂಕ:26-09-2017.
2. ಅಧ್ಯಕ್ಷರು, ಕರ್ನಾಟಕ ಸರ್ಕಾರಿ ಕಾಲೇಜು, ಅಧ್ಯಾಪಕರ ಸಂಘ (ರಿ) ಇವರು ಸಲ್ಲಿಸಿರುವ ಮನವಿ ದಿನಾಂಕ:03-10-2017.
3. ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ.ಶ್ರೀಕಂಠೇಗೌಡ ಇವರು ಸಲ್ಲಿಸಿರುವ ಮನವಿ ಪತ್ರ ದಿನಾಂಕ:03-10-2017.
4. ಅಧ್ಯಕ್ಷರು, ಕರ್ನಾಟಕ ಸರ್ಕಾರಿ ಕಾಲೇಜು ಎಸ್.ಸಿ/ಎಸ್.ಟಿ ಅಧ್ಯಾಪಕರ ಸಂಘ (ರಿ) ಇವರು ಸಲ್ಲಿಸಿರುವ ಮನವಿ ದಿನಾಂಕ:04-10-2017.

*****

ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಲಿ ಇರುವ ಪ್ರಾಂಶುಪಾಲರ ಹುದ್ದೆಗಳನ್ನು ಸೇವಾ ಜೇಷ್ಠತೆಯಲ್ಲಿ ಹಿರಿಯರಾದ ಸಹ ಪ್ರಾಧ್ಯಾಪಕರುಗಳಿಗೆ ಅನ್ಯ ಕಾರ್ಯ ನಿಮಿತ್ತ ಪ್ರಭಾರಿ ಪ್ರಾಂಶುಪಾಲರಾಗಿ ನೇಮಿಸಲು ದಿನಾಂಕ:09-10-2017ರಂದು ಬೆಳಗ್ಗೆ 11.00 ಗಂಟೆಗೆ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ನಡೆಸಲು ಉಲ್ಲೇಖ(1)ರ ಟಿಪ್ಪಣಿಯಲ್ಲಿ ನಿಗದಿಪಡಿಸಲಾಗಿತ್ತು. ಆದರೆ ಉಲ್ಲೇಖ(2) ರಿಂದ (4)ರ ಮನವಿ ಪತ್ರಗಳಲ್ಲಿ ಅನ್ಯ ಕಾರ್ಯ ನಿಮಿತ್ತ ಪ್ರಾಂಶುಪಾಲರ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ರದ್ದುಪಡಿಸಿ, ಖಾಯಂ ಪ್ರಾಂಶುಪಾಲರುಗಳನ್ನು ನೇಮಿಸುವಂತೆ ಕೋರಿರುವ ಹಿನ್ನೆಲೆಯಲ್ಲಿ ದಿನಾಂಕ:09-10-2017ರಂದು ನಡೆಯಬೇಕಾಗಿರುವ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ತಡೆಹಿಡಿಯಲಾಗಿದೆ.

ಕಾಲೇಜು ಶಿಕ್ಷಣ ಆಯುಕ್ತರು

ಇವರಿಗೆ:
1. ಜಂಟಿ ನಿರ್ದೇಶಕರು, ಪ್ರಾದೇಶಿಕ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು/ಮೈಸೂರು/ಮಂಗಳೂರು/ಶಿವಮೊಗ್ಗ/ಧಾರವಾಡ/ಕಲಬುರಗಿ
2. ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರು/ಪ್ರಭಾರಿ ಪ್ರಾಂಶುಪಾಲರುಗಳಿಗೆ-ಅಗತ್ಯ ಕ್ರಮಕ್ಕಾಗಿ.
3. ಮಾಹಿತಿ ಅಧಿಕಾರಿಗಳು, ಮಾಹಿತಿ ತಂತ್ರಜ್ಞಾನ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು-ಅಗತ್ಯ ಕ್ರಮಕ್ಕಾಗಿ.
4. ಕಛೇರಿ ಪ್ರತಿ.